# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಕೆ. ಪ್ರತಾಪಸಿಂಹ ನಾಯಕ್ ಇವರು ನಿಯಮ–72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳಲ್ಲಿ ಹೆಚ್ಚಿನ ಆರ್ಥಿಕ ಸಂಪನ್ಮೂಲಗಳನ್ನು ಹೊಂದಿರುವ ಗ್ರಾಮ ಪಂಚಾಯತಿಗಳು ಹೆಚ್ಚುವರಿ ಡೇಟಾ ಎಂಟ್ರಿ ಆಪರೇಟರ್ (DEO) ಗಳನ್ನು ಹೊಂದುವುದು ಅತ್ಯಂತ ಅನಿವಾರ್ಯ ಮತ್ತು ಅವಶ್ಯವಾಗಿದೆ. ಸದರಿ ಗ್ರಾಮ ಪಂಚಾಯತಿಗಳು ಅತೀ ಹೆಚ್ಚಿನ ಕಾರ್ಯಭಾರ ಹಾಗೂ ಒತ್ತಡವನ್ನು ಹೊಂದಿದ್ದು ಈಗಿರುವ ಒಬ್ಬರೇ ಡೇಟಾ ಎಂಟ್ರಿ ಆಪರೇಟರ್ (DEO) ಈ ಕಾರ್ಯಭಾರ ಹಾಗೂ ಒತ್ತಡವನ್ನು ನಿಭಾಯಿಸಿ ಸಾರ್ವಜನಿಕರಿಗೆ ಸಮರ್ಪಕ ಸೇವೆ ನೀಡಲು ಸಾಧ್ಯವಾಗುತ್ತಿಲ್ಲ.

ರಾಜ್ಯದಲ್ಲಿ ಹೆಚ್ಚಿನ ಆರ್ಥಿಕ ಸಂಪನ್ಮೂಲಗಳನ್ನು ಹೊಂದಿರುವ ಗ್ರಾಮ ಪಂಚಾಯತಿಗಳಲ್ಲಿ ಹೆಚ್ಚುವರಿ ಡೇಟಾ ಎಂಟ್ರಿ ಆಪರೇಟರ್ (DEO) ಗಳನ್ನು ನೇಮಿಸದೇ ಇರುವುದು ಹಾಗೂ ಈಗಿರುವ ಡೇಟಾ ಎಂಟ್ರಿ ಆಪರೇಟರ್ (DEO) ಗಳನ್ನು ಪದೋನ್ನತಿ ಸಂದರ್ಭದಲ್ಲಿ ಪರಿಗಣೀಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

****

**ಉತ್ತರ:** ಗ್ರಾಮ ಪಂಚಾಯಿತಿ ನೌಕರರಿಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020ನ್ನು ರೂಪಿಸಲಾಗಿರುತ್ತದೆ.

ಸದರಿ ನಿಯಮಗಳ ಉಪ ನಿಯಮ 6 ರಲ್ಲಿ ಬಿಲ್ ಕಲೆಕ್ಟರ್ ಮತ್ತು ಕ್ಲಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಲ್ಲಿ ಮಂಜೂರಾದ ಹುದ್ದೆ ಖಾಲಿ ಇದ್ದಲ್ಲಿ, ವಾಟರ್ ಆಪರೇಟರ್/ ಅಟೆಂಡೆಂಟ್/ ಕ್ಲೀನರ್ಸ್ ವೃಂದದಿಂದ ಸಂಯುಕ್ತ ಜೇಷ್ಠತಾ ಪಟ್ಟಿ ಆಧಾರದ ಮೇಲೆ ಗ್ರಾಮ ಪಂಚಾಯಿತಿಯು ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಸದರಿ ನಿಯಮಗಳಲ್ಲಿ ಈ ಕೆಳಕಂಡಂತೆ ಸಿಬ್ಬಂದಿ ವರ್ಗದ ಮಾದರಿ ಹಾಗೂ ನೇಮಕಾತಿ ವಿಧಾನವನ್ನು ನಿರ್ದಿಷ್ಟಪಡಿಸಿದೆ.

1. ಬಿಲ್‌ಕಲೆಕ್ಟರ್,
2. ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್,
3. ಡಾಟಾ ಎಂಟ್ರಿ ಆಪರೇಟರ್,
4. ವಾಟರ್ ಆಪರೇಟರ್,
5. ಅಟೆಂಡೆಂಟ್,
6. ಕ್ಲೀನರ್ಸ್.

ಈ ನಿಯಮಗಳಲ್ಲಿ ಸಿಬ್ಬಂದಿ ವರ್ಗದ ಮಾದರಿಯನ್ನು ನಿರ್ದಿಷ್ಟಪಡಿಸಿದ್ದು, ಪ್ರತಿ ಗ್ರಾಮ ಪಂಚಾಯತಿಗೆ ಹುದ್ದೆಗಳ ಸಂಖ್ಯೆಯನ್ನು ನಿಗಧಿಪಡಿಸುವುದಾಗಿ ತಿಳಿಸಿದ್ದು, ಅದರಂತೆ ರಾಜ್ಯದ ಪ್ರತಿ ಗ್ರಾಮ ಪಂಚಾಯತಿಗೆ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆಯನ್ನು ನಿಗಧಿಪಡಿಸಿದ್ದು, ಈ ಹುದ್ದೆಗೆ ಆಯ್ಕೆ ಮಾಡಿ ನೇಮಕಾತಿ ಮಾಡಲು ಮತ್ತು ನೇಮಕಾತಿ ಹೊಂದಿದ ನೌಕರರಿಗೆ ಬಾಪೂಜಿ ಸೇವಾ ಕೇಂದ್ರದಲ್ಲಿ ಸಂಗ್ರಹವಾಗುವ ಮೊತ್ತದಿಂದ ವೇತನವನ್ನು ಪಾವತಿಸಲು ಕ್ರಮ ಕೈಗೊಳ್ಳುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

---

ಸಂಖ್ಯೆ:ಗ್ರಾಅಪ 136 ಗ್ರಾಪಂಅ 2023.

(ಪ್ರಿಯಾಂಕ್ ಖರ್ಗೆ).
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.